**Akashvani : Bangalore**
**National Bulletin In Kannada**
**21.10.2024 / 13.10 hrs**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**21.10.2024 / 13.10 hrs**

**<><*<><>*><>**

**ಮುಖ್ಯಾಂಶಗಳು**

೧. ಅಲಿಘರ್ ರಾಜಾ ಮಹೇಂದ್ರ ಪ್ರತಾಪ್ ಸಿಂಗ್ ರಾಜ್ಯ ವಿಶ್ವವಿದ್ಯಾಲಯದ ಮೊದಲ ಘಟಿಕೋತ್ಸವದಲ್ಲಿ ಉಪರಾಷ್ಟ್ರಪತಿ ಭಾಗಿ

೨. ಇಂದು ಪೊಲೀಸ್ ಸಂಸ್ಮರಣಾ ದಿನ ; ಕೇಂದ್ರ ಗೃಹ ಸಚಿವ ಅಮಿತ್ ಶಾ ಗೌರವ ನಮನ

೩. ನೌಕಾಪಡೆ ಮುಖ್ಯಸ್ಥ ಅಡ್ಮಿರಲ್ ದಿನೇಶ್ ತ್ರಿಪಾಠಿ ಯುಎಇ ಪ್ರವಾಸ ; ರಕ್ಷಣಾ ಸಹಕಾರ ಬಲಪಡಿಸಲು ಒತ್ತು

೪. ಅರ್ಚರಿ ವಿಶ್ವಕಪ್ ; ಭಾರತದ ದೀಪಿಕಾ ಕುಮಾರಿಗೆ ಬೆಳ್ಳಿ ಪದಕ

**<><*<><>*><>**

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಅವರಿಂದು ಅಲಿಘರ್ ರಾಜಾ ಮಹೇಂದ್ರ ಪ್ರತಾಪ್ ಸಿಂಗ್ ರಾಜ್ಯ ವಿಶ್ವವಿದ್ಯಾಲಯದ ಮೊದಲ ಘಟಿಕೋತ್ಸವದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದಾರೆ.

ಉಪರಾಷ್ಟ್ರಪತಿಗಳ ಜೊತೆಗೆ ಉತ್ತರ ಪ್ರದೇಶದ ರಾಜ್ಯಪಾಲರಾದ ಆನಂದಿಬೆನ್ ಪಟೇಲ್ ಘಟಿಕೋತ್ಸವದ ಸಮಯದಲ್ಲಿ ಪದವಿ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ೪೧ ಚಿನ್ನದ ಪದಕಗಳನ್ನು ವಿತರಿಸಿದರು. ಈ ವೇಳೆ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಉಪರಾಷ್ಟ್ರಪತಿ ಇಂದು ಎಲ್ಲರೂ ಭೂಮಿಯ ಪ್ರಾಮುಖ್ಯತೆ ಕುರಿತು ಜಾಗೃತರಾಗುವ ಅಗತ್ಯವಿದೆ. ಭೂಮಿಯು ನಮ್ಮ ಏಕಮಾತ್ರ ವಾಸಸ್ಥಾನವಾಗಿದೆ. ಈ ದೃಷ್ಟಿಕೋನದೊಂದಿಗೆ ಭೂಮಿಯನ್ನು ಸಂರಕ್ಷಿಸುವ ನಿಟ್ಟಿನಲ್ಲಿ ತಾಯಿ ಹೆಸರಿನಲ್ಲಿ ಒಂದು ಗಿಡ ಎಂಬ ಅಭಿಯಾನವನ್ನು ಆರಂಭಿಸಲಾಗಿದೆ ಎಂದರು. ಈ ವಿಶ್ವವಿದ್ಯಾಲಯದಿಂದ ತೇರ್ಗಡೆ ಹೊಂದುತ್ತಿರುವ ವಿದ್ಯಾರ್ಥಿಗಳ ಸಾಧನೆಗಳು ದೇಶಕ್ಕೆ ಆಸ್ತಿಯಾಗಿದೆ. ದೇಶದ ಸರ್ವಾಂಗೀಣ ಅಭಿವೃದ್ಧಿಯಲ್ಲಿ ಅವರೆಲ್ಲರ ಪಾತ್ರ ಪ್ರಮುಖವಾಗಿರುತ್ತದೆ ಎಂದು ಉಪರಾಷ್ಟ್ರಪತಿ ಹೇಳಿದರು. ೨೦೧೯ರಲ್ಲಿ, ಉತ್ತರಪ್ರದೇಶ ಸರ್ಕಾರ

ಅಲಿಘರ್‌ನಲ್ಲಿ ರಾಜ್ಯಮಟ್ಟದ ವಿಶ್ವವಿದ್ಯಾಲಯ ಪ್ರಾರಂಭಿಸುವುದಾಗಿ ಘೋಷಿಸಿತ್ತು. ನಂತರ, ೨೦೨೧ರ ಸೆಪ್ಟೆಂಬರ್ ೧೪ ರಂದು, ಪ್ರಧಾನಿ ನರೇಂದ್ರ ಮೋದಿ ಅವರು, ಈ ವಿಶ್ವವಿದ್ಯಾಲಯದ ಶಂಕುಸ್ಥಾಪನೆ ನೆರವೇರಿಸಿದ್ದರು.  ಸಮಾರಂಭದಲ್ಲಿ, ರಾಜ್ಯಪಾಲ ಆನಂದಿ ಬೆನ್ ಪಟೇಲ್ ಅವರು ವಿಶ್ವವಿದ್ಯಾನಿಲಯ ದತ್ತು ಪಡೆದ ಐದು ಗ್ರಾಮಗಳ ಪ್ರಾಥಮಿಕ ಮತ್ತು ಪ್ರೌಢಶಾಲೆಗಳು ಮತ್ತು ಅಂತರ ಕಾಲೇಜುಗಳಲ್ಲಿ ಆಯೋಜಿಸಲಾದ ಮೂರು ಸ್ಪರ್ಧೆಗಳಲ್ಲಿ ವಿಜೇತ ವಿದ್ಯಾರ್ಥಿಗಳನ್ನು ಸನ್ಮಾನಿಸಲಿದ್ದಾರೆ.

<><*<><>*><>

ಪೊಲೀಸ್ ಸಂಸ್ಮರಣಾ ದಿನವಾದ ಇಂದು ಗೃಹ ಸಚಿವ ಅಮಿತ್ ಶಾ, ತಮ್ಮ ಕರ್ತವ್ಯದ ವೇಳೆ ಹುತಾತ್ಮರಾದ ಪೊಲೀಸ್ ಸಿಬ್ಬಂದಿಗೆ ಗೌರವ ನಮನ ಸಲ್ಲಿಸಿದ್ದಾರೆ. ಇಂದು ಬೆಳಿಗ್ಗೆ ಗೃಹ ಖಾತೆ ರಾಜ್ಯ ಸಚಿವ ಬಂಡಿ ಸಂಜಯ್ ಕುಮಾರ್, ಗೃಹ ಕಾರ್ಯದರ್ಶಿ ಗೋವಿಂದ್ ಮೋಹನ್ ಸೇರಿದಂತೆ ಹಲವು ಗಣ್ಯರು ನವದೆಹಲಿಯ ರಾಷ್ಟ್ರೀಯ ಪೊಲೀಸ್ ಸ್ಮಾರಕಕ್ಕೆ ಪುಷ್ಪನಮನ ಮಾಡಿ ಹುತಾತ್ಮರಿಗೆ ಗೌರವನಮನ ಸಲ್ಲಿಸಿದರು. ಬಳಿಕ ಮಾತನಾಡಿದ ಅಮಿತ್ ಶಾ, ೩೬ ಸಾವಿರದ ೪೬೮ ಪೊಲೀಸ್ ಸಿಬ್ಬಂದಿ ಕರ್ತವ್ಯ ನಿರತರಾಗಿದ್ದ ವೇಳೆ ಹುತಾತ್ಮರಾಗಿದ್ದಾರೆ. ಕಳೆದ ಒಂದು ವರ್ಷದಲ್ಲಿ ೨೧೬ ಪೊಲೀಸ್ ಸಿಬ್ಬಂದಿ ದೇಶಕ್ಕಾಗಿ ತಮ್ಮ ಪ್ರಾಣವನ್ನೇ ಸಮರ್ಪಿಸಿದ್ದಾರೆ. ಕಳೆದ ದಶಕದಲ್ಲಿ ವೀರ ಯೋಧರ ಪ್ರಯತ್ನದಿಂದಾಗಿ ಜಮ್ಮು ಮತ್ತು ಕಾಶ್ಮೀರ, ಈಶಾನ್ಯ ಮತ್ತು ಎಡಪಂಥೀಯ ಉಗ್ರವಾದದಿಂದ ಬಾಧಿತವಾಗಿರುವ ಪ್ರದೇಶಗಳಲ್ಲಿ ಶಾಂತಿಯನ್ನು ಪುನಃಸ್ಥಾಪಿಸಲಾಗಿದೆ ಎಂದು ಹೇಳಿದರು.  ಮೂರು ಹೊಸ ಅಪರಾಧ ಕಾನೂನುಗಳು ದೇಶದ ಅಪರಾಧ ವ್ಯವಸ್ಥೆಯು ವಿಶ್ವದಲ್ಲೇ ಅತ್ಯಂತ ಆಧುನಿಕವಾಗುವುದನ್ನು ಖಚಿತಪಡಿಸುತ್ತದೆ. ಪ್ರಧಾನ ಮಂತ್ರಿಯಾಗಿ ಅಧಿಕಾರ ವಹಿಸಿಕೊಂಡ ನಂತರ ನರೇಂದ್ರ ಮೋದಿ ಅವರು ಎಲ್ಲಾ ವೀರ ಸೈನಿಕರ ಗೌರವಾರ್ಥವಾಗಿ ದೆಹಲಿಯಲ್ಲಿ ಪೊಲೀಸ್ ಸ್ಮಾರಕವನ್ನು ನಿರ್ಮಿಸಲು ನಿರ್ಧರಿಸಿದ್ದಾರೆ. ಇದು ಯುವಕರು ಮತ್ತು ಸಾರ್ವಜನಿಕರಿಗೆ ಸ್ಫೂರ್ತಿ ನೀಡುತ್ತದೆ. ದೇಶಕ್ಕಾಗಿ ಪ್ರಾಣ ತ್ಯಾಗ ಮಾಡಿದ ವೀರ ಯೋಧರಿಗೆ ದೇಶ ಸದಾ ಋಣಿಯಾಗಿದೆ ಎಂದರು.

<><*<><>*><>

ನೌಕಾಪಡೆಯ ಮುಖ್ಯಸ್ಥ ಅಡ್ಮಿರಲ್ ದಿನೇಶ್ ಕೆ. ತ್ರಿಪಾಠಿ, ಇಂದು ಯುಎಇಗೆ ನಾಲ್ಕು ದಿನಗಳ ಪ್ರವಾಸ ಕೈಗೊಂಡಿದ್ದಾರೆ. ಉಭಯ ದೇಶಗಳ ನಡುವಿನ ರಕ್ಷಣಾ ಸಹಕಾರವನ್ನು ಬಲಪಡಿಸುವ ಸಲುವಾಗಿ ಕೈಗೊಂಡಿರುವ ಈ ಭೇಟಿಯ ಸಮಯದಲ್ಲಿ ಅವರು, ಯುಎಇ ನೌಕಾ ಪಡೆಗಳ

ಕಮಾಂಡರ್, ರಿಯರ್ ಅಡ್ಮಿರಲ್ ಪೈಲಟ್ ಸಯೀದ್ ಬಿನ್ ಹಮ್ದಾನ್ ಅಲ್ ನಹ್ಯಾನ್ ಮತ್ತು ಯುಎಇಯ ಇತರ ಹಿರಿಯ ಸರ್ಕಾರಿ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಲಿದ್ದಾರೆ. ಬಳಿಕ ಅವರು ಯುಎಇಯ ರಾಷ್ಟ್ರೀಯ ರಕ್ಷಣಾ ಕಾಲೇಜಿಗೆ ಭೇಟಿ ನೀಡಲಿದ್ದು, ಅಲ್ಲಿ ಅವರು ವಿದ್ಯಾರ್ಥಿ ಅಧಿಕಾರಿಗಳೊಂದಿಗೆ ಸಂವಾದ ನಡೆಸಲಿದ್ದಾರೆ. ಈ ಭೇಟಿಯು ಎಲ್ಲಾ ವಲಯಗಳಲ್ಲಿ ಆಳವಾದ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಗೆ ಅನುಗುಣವಾಗಿ ರಕ್ಷಣಾ ಸಹಕಾರವನ್ನು ವರ್ಧಿಸಲು ಮತ್ತು ಭಾರತ ಮತ್ತು ಯುಎಇ ನಡುವಿನ ದ್ವಿಪಕ್ಷೀಯ ಕಡಲ ಸಂಬಂಧಗಳನ್ನು ಬಲಪಡಿಸುವ ಗುರಿಯನ್ನು ಹೊಂದಿದ್ದು, ಎರಡು ನೌಕಾಪಡೆಗಳ ನಡುವಿನ ಸಹಕಾರದ ಹೊಸ ಮಾರ್ಗಗಳನ್ನು ಅನ್ವೇಷಿಸಲು ಸಹಕಾರಿಯಾಗಲಿದೆ.

<><*<><>*><>

ನಾಳೆ ಮತ್ತು ನಾಡಿದ್ದು ನಡೆಯಲಿರುವ ೧೬ ನೇ ಬ್ರಿಕ್ಸ್ ಶೃಂಗಸಭೆಯಲ್ಲಿ ಪಾಲ್ಗೊಳ್ಳಲು ಪ್ರಧಾನಿ ನರೇಂದ್ರ ಮೋದಿ ಇಂದಿನಿಂದ ರಷ್ಯಾ ಪ್ರವಾಸ ಕೈಗೊಳ್ಳಲಿದ್ದಾರೆ. ಶೃಂಗ ಸಭೆಯ ನೇಪಥ್ಯದಲ್ಲಿ ಪ್ರಧಾನಿ ಬ್ರಿಕ್ಸ್ ಸದಸ್ಯ ರಾಷ್ಟ್ರಗಳ ಹಾಗೂ ಆಹ್ವಾನಿತ ದೇಶಗಳ ನಾಯಕರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಲಿದ್ದಾರೆ. ದಕ್ಷಿಣ ಆಫ್ರಿಕಾದಲ್ಲಿ ೨೦೨೩ರ ಶೃಂಗಸಭೆಯಲ್ಲಿ ಈಜಿಪ್ಟ್, ಇರಾನ್, ಇಥಿಯೋಪಿಯಾ ಮತ್ತು ಯುಎಇ ರಾಷ್ಟ್ರಗಳಿಗೆ ಸದಸ್ಯತ್ವವನ್ನು ನೀಡಿ ಬಿಕ್ಸ್‌ಅನ್ನು ಒಂಬತ್ತು ಸದಸ್ಯರ ಗುಂಪಾಗಿ ವಿಸ್ತರಿಸಿದ ನಂತರ ನಡೆಯುತ್ತಿರುವ ಮೊದಲ ಶೃಂಗಸಭೆ ಇದಾಗಿದೆ.

ರಷ್ಯಾದ ಅಧ್ಯಕ್ಷತೆಯಲ್ಲಿ ಕಜಾನ್‌ನಲ್ಲಿ ನಡೆಯುತ್ತಿರುವ ೧೬ ನೇ ಬ್ರಿಕ್ಸ್ ಶೃಂಗಸಭೆಯಲ್ಲಿ ಭಾಗವಹಿಸಲು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರ ಆಹ್ವಾನದ ಮೇರೆಗೆ ಪ್ರಧಾನಿ ನರೇಂದ್ರ ಮೋದಿ ಇದೇ ೨೩ ರವರೆಗೆ ರಷ್ಯಾಕ್ಕೆ ಭೇಟಿ ನೀಡಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಜಾಗತಿಕ ಅಭಿವೃದ್ಧಿ ಮತ್ತು ಭದ್ರತೆಗಾಗಿ ಬಹುಪಕ್ಷೀಯತೆಯನ್ನು ಬಲಪಡಿಸುವ ಧ್ಯೇಯದೊಂದಿಗೆ ನಡೆಯುತ್ತಿರುವ ಈ ಶೃಂಗಸಭೆ ಪ್ರಮುಖ ಜಾಗತಿಕ ಸಮಸ್ಯೆಗಳನ್ನು ಚರ್ಚಿಸಲು ಜಾಗತಿಕ ನಾಯಕರಿಗೆ ಪ್ರಮುಖ ವೇದಿಕೆ ಒದಗಿಸುತ್ತದೆ.

<><*<><>*><>

ಒಡಿಶಾ ಕರಾವಳಿಯತ್ತ ಸಾಗುತ್ತಿರುವ ತೀವ್ರ ಚಂಡಮಾರುತ 'ಡಾನಾ'ದಿಂದಾಗಿ ಸಂಭವನೀಯ ವಿಪತ್ತುಗಳನ್ನು ನಿಭಾಯಿಸಲು ರಾಜ್ಯ ಸಜ್ಜಾಗಿದೆ ಚಂಡಮಾರುತ ಗುರುವಾರ ಬೆಳಿಗ್ಗೆ ಭೂಕುಸಿತವನ್ನು ಉಂಟುಮಾಡುವ ಸಾಧ್ಯತೆಯಿದೆ. ಚಂಡಮಾರುತ ಕಾರಣದಿಂದ ರಾಜ್ಯ ಸರ್ಕಾರ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿಯ ರಜೆಯನ್ನು ರದ್ದುಗೊಳಿಸಿದೆ.

<><*<><>*><>

ಸಿಂಗಾಪುರ ಪ್ರವಾಸದಲ್ಲಿರುವ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್, ಸಿಂಗಾಪುರದ ರಾಷ್ಟ್ರೀಯ ವಿಶ್ವವಿದ್ಯಾನಿಲಯದ ಪ್ರೊಫೆಸರ್ ಟ್ಯಾನ್ ಇಂಗ್ ಚೇ ಅವರೊಂದಿಗೆ ಮಾತುಕತೆ ನಡೆಸಿದರು. ಈ ಬಗ್ಗೆ ತಮ್ಮ ಸಾಮಾಜಿಕ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಸಚಿವರು, ಜ್ಞಾನ ವಿನಿಮಯಕ್ಕಾಗಿ ಸಿಂಗಾಪುರದ ರಾಷ್ಟ್ರೀಯ ವಿಶ್ವವಿದ್ಯಾನಿಲಯ ಮತ್ತು ಭಾರತೀಯ ಉನ್ನತ ಶಿಕ್ಷಣ ಸಂಸ್ಥೆಗಳ ನಡುವಿನ ಶೈಕ್ಷಣಿಕ ಮತ್ತು ಸಂಶೋಧನಾ ಸಹಯೋಗವನ್ನು ಬಲಪಡಿಸಲು ಪೂರಕವಾದ ಸಾಮರ್ಥ್ಯಗಳನ್ನು ಸದುಪಯೋಗಪಡಿಸಿಕೊಳ್ಳುವ ಬಗ್ಗೆ ಚರ್ಚಿಸಲಾಯಿತು ಎಂದಿದ್ದಾರೆ. ಉಭಯ ರಾಷ್ಟ್ರಗಳ ನಡುವೆ ಎಲ್ಲಾ ಶೈಕ್ಷಣಿಕ ರಂಗಗಳಲ್ಲಿ ಜ್ಞಾನ ಹಂಚಿಕೆಯನ್ನು ಬಲಗೊಳಿಸುವುದರ ಬಗ್ಗೆಯೂ ಚರ್ಚಿಸಲಾಯಿತು. ನವೋದ್ಯಮ, ವೈದ್ಯಕೀಯ, ಆರೋಗ್ಯ ವಿಜ್ಞಾನ, ಡಿಜಿಟಲೀಕರಣ ಸೇರಿದಂತೆ ಹಲವು ವಲಯಗಳಲ್ಲಿ ಮೌಲ್ಯಗಳ ಸೃಷ್ಟಿಗೆ ಸಹಯೋಗ ಸಾಧ್ಯವಾಗಲಿದೆ ಎಂದು ಸಚಿವರು ತಿಳಿಸಿದ್ದಾರೆ. ಭಾರತದ ಯುವಕರಿಗೆ ಗುಣಮಟ್ಟದ ಉನ್ನತ ಶಿಕ್ಷಣದ ಪ್ರವೇಶವನ್ನು ಹೆಚ್ಚಿಸುವುದು ಮತ್ತು ಭಾರತದ ಶಿಕ್ಷಣ ವ್ಯವಸ್ಥೆಯ ಅಂತಾರಾಷ್ಟ್ರೀಕರಣ, ಹೊಸ ಶಿಕ್ಷಣ ನೀತಿ ೨೦೨೦ ರ ಪ್ರಮುಖ ಅಂಶಗಳು ಎಂದು ಪುನರುಚ್ಚರಿಸಿದರು.

<><*<><>*><>

ಇಂದು ಅಯೋಡಿನ್ ಕೊರತೆ ದಿನ. ಅಯೋಡಿನ್ ಕೊರತೆಯಿಂದ ಉಂಟಾಗುವ ಆರೋಗ್ಯದ ಸಮಸ್ಯೆಗಳ ಬಗ್ಗೆ ಜಾಗೃತಿ ಮೂಡಿಸಲು ಜಾಗತಿಕ ಮಟ್ಟದಲ್ಲಿ ಅಕ್ಟೋಬರ್ ೨೧ ರಂದು ಜಾಗತಿಕ ಅಯೋಡಿನ್ ಕೊರತೆಯ ಅಸ್ವಸ್ಥತೆಗಳ ತಡೆಗಟ್ಟುವಿಕೆ ದಿನ ಎಂದು ಆಚರಿಸಲಾಗುತ್ತದೆ. ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳುವಲ್ಲಿ ಅಯೋಡಿನ್‌ನ ಅಗತ್ಯ ಪಾತ್ರದ ಬಗ್ಗೆ ಮತ್ತು ಅದರ ಕೊರತೆಯ ಪರಿಣಾಮಗಳನ್ನು ಈ ದಿನ ಒತ್ತಿಹೇಳುತ್ತದೆ. ಅಯೋಡಿನ್, ಥೈರಾಯ್ಡ್ ಹಾರ್ಮೋನುಗಳ ನಿರ್ಣಾಯಕ ಅಂಶವಾಗಿದೆ.

<><*<><>*><>

ಪ್ರಾದೇಶಿಕ ಸಂಪರ್ಕ ಯೋಜನೆ - ಉದೇ ದೇಶ್ ಕಾ ಆಮ್ ನಾಗ್ರಿಕ್ ಆರ್‌ಸಿಎಸ್-ಉಡಾನ್ ಇಂದಿಗೆ ಎಂಟು ವರ್ಷಗಳನ್ನು ಪೂರ್ಣಗೊಳಿಸಿದೆ. ಈ ಯೋಜನೆಯನ್ನು ನಾಗರಿಕ ವಿಮಾನಯಾನ ಸಚಿವಾಲಯವು ೨೦೧೬ ರಲ್ಲಿ ಪ್ರಾರಂಭಿಸಿತ್ತು. ಉಡಾನ್ ಯೋಜನೆಯು ದೇಶದ ಕಡಿಮೆ ವಿಮಾನ ಸೇವೆ ಇರುವ ಪ್ರದೇಶಗಳಲ್ಲಿ ವಿಮಾನ ಮಾರ್ಗಗಳನ್ನು ಸುಧಾರಿಸಲು ಮತ್ತು ಸಾಮಾನ್ಯ

ನಾಗರಿಕರ ಆಕಾಂಕ್ಷೆಗಳನ್ನು ಪೂರೈಸಲು ಕೇಂದ್ರೀಕರಿಸುತ್ತದೆ.  ಇದರ ಅಡಿಯಲ್ಲಿ, ಮೊದಲ ಆರ್‌ಸಿಎಸ್-ಉಡಾನ್ ವಿಮಾನವನ್ನು ೨೦೧೭ ರ ಏಪ್ರಿಲ್ ೨೭ ರಂದು ಪ್ರಧಾನಿ ನರೇಂದ್ರ ಮೋದಿ ಉದ್ಘಾಟಿಸಿದ್ದರು.

<><*<><>*><>

ಎಲ್ಲ ಕ್ಷೇತ್ರಗಳಲ್ಲಿ ಅಭೂತಪೂರ್ವವಾಗಿ ಮುನ್ನಡೆಯುತ್ತಿರುವ ಭಾರತ ಜಾಗತಿಕ ಭವಿಷ್ಯ ರೂಪಿಸುವಲ್ಲಿ ಮುಂದಾಳತ್ವ ವಹಿಸುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.  ಖಾಸಗಿ ಮಾಧ್ಯಮವೊಂದು ಆಯೋಜಿಸಿದ್ದ ವಿಶ್ವ ಶೃಂಗಸಭೆಯನ್ನು ಉದ್ದೇಶಿಸಿ ಮಾತನಾಡಿದ ಪ್ರಧಾನಿ, ಜಗತ್ತು ಅನಿಶ್ಚಿತತೆಯ ಸುಳಿಯಲ್ಲಿ ಸಿಲುಕಿರುವ ಹೊತ್ತಿನಲ್ಲಿ ಭಾರತ ಭರವಸೆಯ ಬೆಳಕಾಗಿ ಹೊರಹೊಮ್ಮಿದೆ ಎಂದರು.

<><*<><>*><>

ಮೆಕ್ಸಿಕೋದಲ್ಲಿ ಇಂದು ನಡೆದ ಅರ್ಚರಿ ವಿಶ್ವಕಪ್‌ನ ಫೈನಲ್‌ನ ಮಹಿಳಾ ರಿಕರ್ವ್ ವಿಭಾಗದಲ್ಲಿ ಭಾರತದ ದೀಪಿಕಾ ಕುಮಾರಿ ಬೆಳ್ಳಿ ಪದಕ ಗೆದ್ದಿದ್ದಾರೆ.  ಚೀನಾದ ಲಿ ಜಿಯಾಮ್ಯಾನ್ ವಿರುದ್ಧದ ಪಂದ್ಯದಲ್ಲಿ ದೀಪಿಕಾ ೦-೬ ಅಂತರದಲ್ಲಿ ಪರಾಭವಗೊಂಡರು. ಅರ್ಚರಿ ವಿಶ್ವಕಪ್‌ನಲ್ಲಿ ದೀಪಿಕಾ ಅವರಿಗೆ ಇದು ೩ನೇ ಬೆಳ್ಳಿ ಪದಕವಾಗಿದೆ. ಸೆಮಿಫೈನಲ್‌ನಲ್ಲಿ ದೀಪಿಕಾ ಮೆಕ್ಸಿಕೋದ ಅಲೆಜಾಂಡ್ರ ವೆಲೆನ್ಸಿಯಾ ವಿರುದ್ಧ ೬-೪ ಅಂಕಗಳ ಅಂತರದಲ್ಲಿ ಗೆಲುವು ಸಾಧಿಸಿ ಫೈನಲ್ ಪ್ರವೇಶಿಸಿದ್ದರು.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಅಪರಾಹ್ನ ೨.೩೦ ಕ್ಕೆ <>*><>